**ಎಲ್.ಎ.ಸಿ ನಂ. 6/2023** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 13.12.2024 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**ಪಾಟೀ ಸವಾಲುಃ ಮಾನ್ಯ ಎ.ಜಿ.ಪಿ ರವರಿಂದಃ**

ಪಡುಕೋಟೆ ಗ್ರಾಮದ ಸರ್ವೆ ನಂ.206ರ 30 ಗುಂಟೆ ಜಮೀನು ಭೂಸ್ವಾಧೀನವಾಗಿರುತ್ತದೆ. ಭೂಸ್ವಾಧೀನವಾಗಿ ಉಳಿದಿರುವ ಆಸ್ತಿಯು ಇಂಡೀಕರಣವಾಗಿರುವ ಬಗ್ಗೆ ಪಹಣಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಎದುರುದಾರರ ಕಛೇರಿಯಿಂದ ಪರಿಹಾರ ಹಣವನ್ನು ಪಡೆದುಕೊಳ್ಳಲು ನಮೂನೆ-12(2) ನ್ನು 20 ವರ್ಷಗಳ ಹಿಂದೆ ಪಡೆದಿರುತ್ತೇನೆ. ಹುಣಸೂರಿನ ನ್ಯಾಯಾಲಯದಲ್ಲಿ ನಾನು ರೆಪರೆನ್ಸನ್ನು ಕಳುಹಿಸುವ ಬಗ್ಗೆ ಸಲ್ಲಿಸಿರುವ ಪ್ರಕರಣದ ಸಂಖ್ಯೆ ನನಗೆ ಗೊತ್ತಿರುವುದಿಲ್ಲ. ಸೂಕ್ತ ಸಮಯದಲ್ಲಿ ರೆಪರೆನ್ಸ ಅರ್ಜಿಯನ್ನು ಕಳುಹಿಸುವ ಬಗ್ಗೆ ಕಾನೂನು ಹೋರಾಟ ಮಾಡಲು ತೊಂದರೆ ಇರಲಿಲ್ಲ. ಭೂಸ್ವಾಧೀನವಾಗಿರುವ ಜಮೀನಿನಲ್ಲಿ ಬೆಳೆ ಬೆಳೆಯಲು ನೀರಿನ ವ್ಯವಸ್ಥೆಗಾಗಿ ಬೋರ್ವೆಲ್ ಇರಲಿಲ್ಲ. ಸಾಕ್ಷಿದಾರರು ಮುಂದುವರಿದು ಪಕ್ಕದಲ್ಲಿ ಕೆರೆ ಇದ್ದು ಮೋಟಾರ್ ಮೂಲಕ ನೀಡು ಹಾಯಿಸುತ್ತಿದ್ದೆವು ಎನ್ನುವರು. ನಿಪಿ1ರಲ್ಲಿ ಹೇಳಿರುವ ಆಸ್ತಿಯು ಸಣ್ಣದೇವಮ್ಮನಿಗೆ ಸಂಬಂಧಿಸಿದ್ದು ಅದು ಪಡುಕೋಟೆ ಗ್ರಾಮದಲ್ಲಿರುತ್ತದೆ. ಸದರಿ ಸಣ್ಣದೇವಮ್ಮರವರಿಗೆ ಸಂಬಂಧಿಸಿದ 1-10 ಎಕರೆ ಜಮೀನು ಭೂಸ್ವಾಧೀನವಾಗಿರುತ್ತದೆ, ಸರಿಯಾಗಿ ಗೊತ್ತಿರುವುದಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವಂತೆ 1 ಎಕರೆಯಲ್ಲಿ ವರ್ಷಕ್ಕೆ 1 ಲಕ್ಷ ಆದಾಯ ಪಡೆಯುತ್ತಿದ್ದ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಈಗಾಗಲೇ ಎದುರುದಾರರು ಮಾರುಕಟ್ಟೆ ಮೌಲ್ಯಕ್ಕೆ ಅನುಗುಣವಾಗಿ ಪರಿಹಾರ ನೀಡಿದ್ದು ನಾನು ಹೆಚ್ಚಿನ ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ನಾನು ನಿಗದಿತ ಸಮಯದಲ್ಲಿ ಹೆಚ್ಚಿನ ಪರಿಹಾರ ಕೋರಿ ಅರ್ಜಿ ಸಲ್ಲಿಸದಿರುವುದರಿಂದ ನಾನು ಯಾವುದೇ ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ಕಾಲ ವಿಳಂಬವಾಗಿ ಅರ್ಜಿ ಸಲ್ಲಿಸಿರುವ ವಿಚಾರ ಗೊತ್ತಿದ್ದರೂ ಸಹ ಸರ್ಕಾರದಿಂದ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.